ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 23ನೇ ಮಾರ್ಚ್, 2020

ವಿಶ್ವ ವಿದ್ಯಾಲಯಗಳಲ್ಲಿ ಹಳೆ ಪಿಂಚಣಿ ಯೋಜನೆ ಮುಂದುವರೆಸುವ ಕುರಿತು

ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :-

1469 (1731) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ವಿವಿಧ ವಿಶ್ವವಿದ್ಯಾಲಯಗಳಲ್ಲಿ 2006ರ ಪೂರ್ವದಲ್ಲಿ ಉಪನ್ಯಾಸಕರಾಗಿ/ಅಸಿಸ್ಟೆಂಟ್ ಪ್ರೊಫೆಸರ್ ಆಗಿ ನೇಮಕಗೊಂಡು ತದನಂತರ ಅಸೋಸಿಯೆಟ್ ಪ್ರೊಫೆಸರ್ ಹಾಗೂ ಪ್ರೊಫೆಸರಾಗಿ ಪದೋನ್ನತಿ ಹೊಂದಿದವರಿಗೆ ಹಳೆ ಪಿಂಚಣಿ ಯೋಜನೆಯನ್ನು ಮುಂದುವರೆಸಲಾಗಿದೆಯೇ ; (ವಿವರ ನೀಡುವುದು)

(ಆ) 2006ರ ಪೂರ್ವದಲ್ಲಿ ಪದವಿ ಕಾಲೇಜುಗಳಲ್ಲಿ ಉಪನ್ಯಾಸಕರಾಗಿ/ ಅಸಿಸ್ಟೆಂಟ್ ಪ್ರೊಫೆಸರ್ ಆಗಿ ನೇಮಕಗೊಂಡು ತದನಂತರ ವಿಶ್ವವಿದ್ಯಾಲಯಗಳಲ್ಲಿ ಅಸೋಸಿಯೆಟ್ ಹಾಗೂ ಪ್ರೊಫೆಸರ್ ಆಗಿ ನೇಮಕ ಹೊಂದಿದವರಿಗೆ ಹಳೆ ಪಿಂಚಣಿ ಯೋಜನೆಯನ್ನು ಮುಂದುವರೆಸಲಾಗಿದೆಯೇ ; (ಮಾಹಿತಿ ನೀಡುವುದು)

(ಇ) ಮೇಲೆ ತಿಳಿಸಿದ ವಿಷಯಗಳಿಗೆ ಸಂಬಂಧಿಸಿದಂತೆ 2006ರ ನಂತರ ಪದೋನ್ನತಿ ಹೊಂದಿ ಅಸೋಸಿಯೆಟ್ ಪ್ರೊಫೆಸರ್ ಹಾಗೂ ಪ್ರೊಫೆಸರ್ ಆಗಿ ಪದೋನ್ನತಿ/ನೇಮಕಾತಿ ಹೊಂದಿ ನಿವೃತ್ತಿಯಾದ ಸಿಬ್ಬಂದಿಗೆ 2-3 ವರ್ಷ ಕಳೆದರೂ ಯಾವ ಪಿಂಚಣಿ ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಮತ್ತು ಈ ಸಮಸ್ಯೆಗೆ ಸರ್ಕಾರ ಯಾವ ಪರಿಹಾರವನ್ನು ಸೂಚಿಸಿದೆ? (ಸಂಪೂರ್ಣ ವಿವರ ನೀಡುವುದು)